## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : Ease of Doing Business - ನಳ ಸಂಪರ್ಕ, ವಿದ್ಯುತ್ ಪ್ರಸರಣ ಮತ್ತು ಇತರೆ ಸೌಲಭ್ಯಗಳಲ್ಲಿ ಮಾಲೀಕತ್ವ ವರ್ಗಾವಣೆ ಮಾಡುವ ಕುರಿತು.

ಓದಲಾಗಿದೆ : 1) State Business Reforms Action Plan 2020-21ರ ಅನುಷ್ಠಾನ- Action Points No. 71 ಮತ್ತು 77

2) ದಿನಾಂಕ: 13-11-2020 ರಂದು ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ EODB ಪರಿಶೀಲನಾ ಸಭೆ.

**ಪ್ರಸ್ತಾವನೆ:**

ಕರ್ನಾಟಕ ಪೌರಸಭೆಗಳ ಅಧಿನಿಯಮ, 1964 ಮತ್ತು ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ, 1976 ರನ್ವಯ ನಗರ ಸ್ಥಳೀಯ ಸಂಸ್ಥೆಗಳು ಆಸ್ತಿಗಳ ನೋಂದಣಿಯಾದ ನಂತರ ನಿಯಮಾನುಸಾರ ಪರಿಶೀಲಿಸಿ ಆಸ್ತಿಗಳ ಮಾಲೀಕತ್ವ ಹಕ್ಕು ವರ್ಗಾವಣೆಯನ್ನು ಮಾಡಬೇಕಿರುತ್ತದೆ.

ರಾಜ್ಯ ವ್ಯವಹಾರ ಸುಧಾರಣಾ ಶಿಫಾರಸ್ಸುಗಳನ್ವಯ ಉಪ-ನೋಂದಣಾಧಿಕಾರಿಗಳ ಕಛೇರಿಯಲ್ಲಿನ ಆಸ್ತಿಗಳ ನೋಂದಣಿ ಪ್ರಕ್ರಿಯೆ ಮತ್ತು ಭೂ ದಾಖಲೆಗಳ ಕಛೇರಿಯಲ್ಲಿನ ಆಸ್ತಿಗಳ ಮಾಲೀಕತ್ವ ಹಕ್ಕು ವರ್ಗಾವಣೆ ಪ್ರಕ್ರಿಯೆಯು ಜೋಡಣೆಯಾಗಬೇಕಿದ್ದು, ಆಸ್ತಿಗಳ ನೋಂದಣಿಯಾದ ತಕ್ಷಣ ಸಂಬಂಧಪಟ್ಟ ಪ್ರಾಧಿಕಾರಗಳು ಅಂದರೆ, ವಿದ್ಯುತ್ ಪ್ರಸರಣ ನಿಗಮ ನಿಯಮಿತ ಕಛೇರಿ, ನೀರು ಸರಬರಾಜು ಕಛೇರಿ, ಇತ್ಯಾದಿಗಳು, ಸ್ವಯಂಚಾಲಿತವಾಗಿ ಮಾಲೀಕತ್ವ ಹಕ್ಕು ವರ್ಗಾವಣೆ ಪ್ರಕ್ರಿಯೆಯನ್ನು ಜಾರಿಗೊಳಿಸಬೇಕಿರುತ್ತದೆ.

ಮೇಲೆ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, Ease of Doing Business ಸುಧಾರಣೆಗಳ ಯಶಸ್ವಿ ಅನುಷ್ಠಾನಕ್ಕಾಗಿ ನಳ / ನೀರು ಮತ್ತು ಒಳಚರಂಡಿ ಸಂಪರ್ಕಕ್ಕೆ ಸಂಬಂಧಪಟ್ಟಂತೆ ಮಾಲೀಕತ್ವ ಹಕ್ಕು ವರ್ಗಾವಣೆ ಮಾಡಲು ಪ್ರತ್ಯೇಕವಾಗಿ ಮನವಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಇದರ ಬದಲಾಗಿ ನಗರ ಸ್ಥಳೀಯ ಸಂಸ್ಥೆಗಳು ಆಸ್ತಿಗಳ ಮಾಲೀಕತ್ವ ಹಕ್ಕು ವರ್ಗಾವಣೆಯ ಆಧಾರದ ಮೇಲೆ ನಗರ ಸ್ಥಳೀಯ ಸಂಸ್ಥೆಗಳು ನಳ / ನೀರು ಮತ್ತು ಒಳಚರಂಡಿ ಸಂಪರ್ಕಗಳಿಗೆ ಮಾಲೀಕತ್ವ ವರ್ಗಾವಣೆ ಮಾಡಲು ಮತ್ತು ಅಗತ್ಯವಿದ್ದಲ್ಲಿ, ಕರ್ನಾಟಕ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿ ಮತ್ತು

P')

ವಿದ್ಯುತ್ ಸರಬರಾಜು ಕಂಪನಿ ನಿಯಮಿತಗಳಿಗೆ ತಿಳಿಸುವ ಕುರಿತಂತೆ ಪೌರಾಡಳಿತ ನಿರ್ದೇಶಕರು ಪ್ರಸ್ತಾವನೆಯನ್ನು ಏಕ ಕಡತದಲ್ಲಿ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಆದೇಶ ಸಂಖೆ: ನಅಇ 08 ಜಿಇಎಲ್ 2021 (ಇ), ಬೆಂಗಳೂರು,**
**ದಿನಾಂಕ: 27.01.2021.**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಮತ್ತು ಅರ್ಜಿದಾರರಿಗೆ ಅನಗತ್ಯವಾಗಿ ಆಗುವ ಹೊರೆಯನ್ನು ತಗ್ಗಿಸುವ ದೃಷ್ಟಿಯಿಂದ ಇಲಾಖೆಯು ಆಸ್ತಿಗಳ ಮಾಲೀಕತ್ವ ಹಕ್ಕು ವರ್ಗಾವಣೆ ಪ್ರಕ್ರಿಯೆಗೆ ಸಂಬಂಧಪಟ್ಟಂತೆ ಪ್ರಸ್ತುತ ಜಾರಿಯಲ್ಲಿರುವ ಕಾರ್ಯವಿಧಾನಗಳನ್ನು ಉತ್ತಮಗೊಳಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಿದ್ದು, ನಳ / ನೀರು ಮತ್ತು ಒಳಚರಂಡಿ ಸಂಪರ್ಕಗಳಿಗೆ ಮಾಲೀಕತ್ವ ವರ್ಗಾವಣೆ ಮಾಡಲು ಪ್ರತ್ಯೇಕವಾಗಿ ಮನವಿ ಸಲ್ಲಿಸುವುದನ್ನು ಇಲಾಖೆಯು ಕೈಬಿಟ್ಟಿದೆ.

ಅರ್ಜಿದಾರರಿಂದ ಪ್ರತ್ಯೇಕವಾಗಿ ಮನವಿಯನ್ನು ಸ್ವೀಕರಿಸದೇ, ಆಸ್ತಿಗಳ ಮಾಲೀಕತ್ವ ಹಕ್ಕು ವರ್ಗಾವಣೆಯಾದ ತಕ್ಷಣ ಸ್ವಯಂಚಾಲಿತವಾಗಿ ನಳ / ನೀರು ಮತ್ತು ಒಳಚರಂಡಿ ಸಂಪರ್ಕಗಳಿಗೆ ಮಾಲೀಕತ್ವ ವರ್ಗಾವಣೆ ಮಾಡಲು ನಗರ ಸ್ಥಳೀಯ ಸಂಸ್ಥೆಗಳಿಗೆ ಸೂಚಿಸಿದೆ. ಹಾಗೂ ಸಂಬಂಧಪಟ್ಟ ಕರ್ನಾಟಕ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿ ಕಛೇರಿಗಳಿಗೆ ಮತ್ತು ವಿದ್ಯುತ್ ಸರಬರಾಜು ಕಂಪನಿ ನಿಯಮಿತಗಳಿಗೆ ಸ್ವಯಂಚಾಲಿತವಾಗಿ ಮಾಹಿತಿಯನ್ನು ನೀಡಲು ಆದೇಶಿಸಿದೆ.

ಈ ಆದೇಶವು ಪ್ರಕಟಿಸಿದ ದಿನಾಂಕದಿಂದ ಜಾರಿಯಲ್ಲಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲತಾ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.
(ಪೌರಾಡಳಿತ-2 & ಮಂಡಳಿ)

**ಗೆ,**

ಪ್ರತಿಯನ್ನು ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಬೆಂಗಳೂರು- ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಮತ್ತು 50 ಪ್ರತಿಗಳನ್ನು ಒದಗಿಸಲು.

**ಇವರಿಗೆ,**

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.

**ಮೆಮೋ: ಪ್ರವ್ಯ(ತಾ)/ಉಪವ್ಯ(ಎಂಐಎಸ್)/ಸಪ್ರವ್ಯ(ಎಂಐಎಸ್)/2020–21**/cys-1771 **ದಿನಾಂಕ:** 17 MAR 2021

**<u>ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ :</u>**

1. ಮುಖ್ಯ ಇಂಜಿನಿಯರ್(ವಿ), ಕಾ ಮತ್ತು ಪಾ ವಲಯ, ಚಾವಿಸನಿನಿ, ಮೈಸೂರು/ಹಾಸನ.
2. ಎಲ್ಲಾ ಅಧೀಕ್ಷಕ ಇಂಜಿನಿಯರ್ (ವಿ), ಕಾ ಮತ್ತು ಪಾ ವೃತ್ತ, ಚಾವಿಸನಿನಿ.
3. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾ ಮತ್ತು ಪಾ ವಿಭಾಗ, ಚಾವಿಸನಿನಿ.
4. ಉಪ ಪ್ರಧಾನ ವ್ಯವಸ್ಥಾಪಕರು, ಎಂಐಎಸ್ ಶಾಖೆ, ನಿಗಮ ಕಛೇರಿ, ಚಾವಿಸನಿನಿ, ಮೈಸೂರು ನಿಗಮದ ವೆಬ್ ಸೈಟ್‌ನಲ್ಲಿ ಪ್ರಕಟಿಸಲು.
5. ಆಪ್ತ ಸಹಾಯಕರು, ವ್ಯನಿ ಇದನ್ನು ಮಾನ್ಯ ವ್ಯ.ನಿ. ರವರ ದಯಾಪರ ಗಮನಕ್ಕೆ ತರಲು ಕೋರಲಾಗಿದೆ.

ಕಛೇರಿ ಪ್ರತಿ/ಮುಖ್ಯ ಕಡತ.

9/3

ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)
ಚಾವಿಸನಿನಿ, ಮೈಸೂರು